ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕರಿಸಲ್ಪಟ್ಟಿತು.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಪ್ರಸ್ತಾವದ ಅಂಗೀಕಾರ

ಶ್ರೀ ಎಸ್.ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ):– ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಸಚಿವರುಗಳ ಸಂಬಳಗಳು ಮತ್ತು ಭತ್ಯೆಗಳ(ತಿದ್ದುಪಡಿ)ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು:– ಪ್ರಸ್ತಾವವನ್ನು ಮಂಡಿಸಲಾಯಿತು.

ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ, **2011ನೇ ಸಾಲಿನ ಕರ್ನಾಟಕ ಸಚಿವರುಗಳ ಸಂಬಳಗಳ ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು.**

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರುದ್ಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇವೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು(ಎರಡನೇ ತಿದ್ದುಪಡಿ)ವಿಧೇಯಕ, 2011

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):– ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು(ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು:- ಪ್ರಸ್ತಾವವನ್ನು ಮಂಡಿಸಲಾಯಿತು. ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2011 ನೇ ಸಾಲಿನ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು (ಎರಡನೇ ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅನುಮೋದನೆ ದೊರಕಿದೆ.

ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ.

2 ರಿಂದ 19ರವರೆಗಿನ ಖಂಡಗಳು ವಿಧೇಯಕದ ಅಂಗವಾಗಿರಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ.

2 ರಿಂದ 19ರವರೆಗಿನ ಖಂಡಗಳು ವಿಧೇಯಕದ ಅಂಗವಾದವು.

ಮೊದಲನೆ ಖಂಡ, ಹೆಸರು ಮತ್ತು ಅವತರಣಿಕೆ

ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಭಾಗವಾಗಬೇಕೆಂಬುದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಪ್ರಸ್ತಾವದ ಅಂಗೀಕಾರ

ಶ್ರೀ ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):- ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು(ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು:- ಪ್ರಸ್ತಾವನೆ ಮಂಡಿಸಲಾಯಿತು.

ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ, **2011 ನೇ ಸಾಲಿನ ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು (ಎರಡನೇ ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು.**

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

ಅಧ್ಯಕ್ಷರು:- ಈಗ ಸದನವನ್ನು ಅನಿರ್ದಿಷ್ಟ ಕಾಲದವರೆಗೆ ಮುಂದೂಡಲಾಗಿದೆ.

(ಸದನವು ಮಧ್ಯಾಹ್ನ 1 ಗಂಟೆ 25 ನಿಮಿಷಕ್ಕೆ ಮುಕ್ತಾಯಗೊಂಡು, ಅನಿರ್ದಿಷ್ಟ ಕಾಲದವರೆಗೆ ಮುಂದೂಡಲಾಯಿತು)

ಅನುಬಂಧ-I

ಗ್ರಾಮ ಪಂಚಾಯ್ತಿಗಳನ್ನು ಮೇಲ್ದರ್ಜೆಗೇರಿಸುವುದು

16 (174) ಶ್ರೀ ಖಾದರ್ ಯು.ಟಿ (ಮಂಗಳೂರು):- ಮಾನ್ಯ ನಗರಾಭಿವೃದ್ಧಿ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಬೆಂಗಳೂರು ಜಲಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ರಾಜ್ಯದಲ್ಲಿರುವ 10,000ಕ್ಕೂ ಹೆಚ್ಚು ಜನಸಂಖ್ಯೆಯ ಗ್ರಾಮ ಪಂಚಾಯ್ತಿಗಳನ್ನು ಮೇಲ್ದರ್ಜೆಗೇರಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;